ಸಿ.ಸಿ. ನಂ.- **1056/2023**

ಪಿ.ಡಬ್ಲ್ಯೂ- 1

ಅಪರ ಸಿವಿಲ್ ನ್ಯಾಯಾಧೀಶರು

ಮತ್ತು ಪ್ರ. ದ. ನ್ಯಾ ದಂ.ಗಳ ನ್ಯಾಯಾಲಯ, ಹೊಸಪೇಟೆ.

ಸಾಕ್ಷಿಯನ್ನು ದಿನಾಂಕ 21-06-2025 ರಂದು ಪ್ರಾಮಾಣೀಕರಿಸಲಾಯಿತು.

| | |
|---|---|
| ಸಾಕ್ಷಿ ಹೆಸರು - | ಕುಮಾರಸ್ವಾಮಿ ಕೆ |
| ತಂದೆಯ ಹೆಸರು - | ರಾಮಪ್ಪ |
| ವಯಸ್ಸು - | 34 ವರ್ಷಗಳು |
| ಉದ್ಯೋಗ - | ವ್ಯವಸಾಯ |
| ವಾಸಸ್ಥಳ - | ಎಂ ಎಂ ಹಳ್ಳಿ, ಹೊಸಪೇಟೆ |

ಮುಖ್ಯ ವಿಚಾರಣೆ- ದೂರುದಾರರ ಪರ ವಕೀಲರಿಂದ -

ನಾನು ನನ್ನ ಮುಖ್ಯ ವಿಚಾರಣೆಗಾಗಿ ಪ್ರಮಾಣ ಪತ್ರವನ್ನು ಸಲ್ಲಿಸುತ್ತಿದ್ದು ಸದರಿ ಪ್ರಮಾಣ ಪತ್ರಕ್ಕೆ ಮಾಹಿತಿಯನ್ನು ನಾನೇ ನೀಡಿ ಬರೆಯಿಸಿದ್ದು ಪ್ರಮಾಣ ಪತ್ರದಲ್ಲಿ ಬರೆದಿರುವ ಎಲ್ಲ ವಿಷಯಗಳು ನನಗೆ ಗೊತ್ತು ಮತ್ತು ಅದರಲ್ಲಿರುವ ಸಹಿಗಳು ನನ್ನದಾಗಿವೆ.

ದಿಃ 11.08.2023 ರಂದು ಆರೋಪಿ ನೀಡಿದ ರೂ. 4,00,000.00 ಮೊತ್ತದ ಚೆಕ್ ನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.- 1 ಎಂದು, ಅದರಲ್ಲಿರುವ ಆರೋಪಿಯ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿ.ಪಿ.- 1-ಎ ಎಂದು, ಬ್ಯಾಂಕಿನ ಹಿಂಬರಹವನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.- 2 ಎಂದು, ದಿಃ 13.09.2023 ರ ಆರೋಪಿಗೆ ನೀಡಿರುವ ಲೀಗಲ್ ನೋಟಿಸ್ಸಿನ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.- 3 ಎಂದು, ಅಂಚೆ ರಸೀದಿಯನ್ನು ಹಾಜರುಪಡಿಸಿದ್ದು ಅದನ್ನು ನಿ.ಪಿ.- 4 ಎಂದು, ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದೇನೆ. ಅದನ್ನು ನಿ.ಪಿ.- 5 ಎಂದು, ಪ್ರತ್ಯೋತ್ತರದ ನೋಟಿಸ್ ನ್ನು ಹಾಜರುಪಡಿಸಿದ್ದೇನೆ. ಅವುಗಳನ್ನು ನಿ.ಪಿ.- 6 ಎಂದು ಗುರುತಿಸಲಾಯಿತು.

(ಆರೋಪಿ ಪರ ವಕೀಲರು ಪಾಟೀಸವಾಲಿಗಾಗಿ ಸಮಯಾವಕಾಶವನ್ನು ಕೇಳಿದ್ದು ಸಮಯಾವಕಾಶವನ್ನು ನೀಡಿ ಮುಂದೂಡಲಾಯಿತು.)

(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೇ. ಸರಿ ಇದೆ.

ಅಪರ ಸಿವಿಲ್ ನ್ಯಾಯಾಲಯ

ಮತ್ತು ಪ್ರ. ದ. ನ್ಯಾ ದಂ.ಗಳು, ಹೊಸಪೇಟೆ.